ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಬಹು ಮಹಡಿ ಕಟ್ಟಡಗಳಿಗೆ ವಾಸಯೋಗ್ಯ ಪ್ರಮಾಣ ಪತ್ರ ನೀಡುವ ಬಗ್ಗೆ

ಶ್ರೀ ಎನ್. ರವಿಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು) –

393 (336) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಮಹಾನಗರದಲ್ಲಿ ಬಹು ಮಹಡಿ ಕಟ್ಟಡಗಳಿಗೆ ವಾಸ ಯೋಗ್ಯ ಪ್ರಮಾಣ ಪತ್ರ ನೀಡುವ ಸಮಯದಲ್ಲಿ ಅಗ್ನಿ ಶಾಮಕ ದಳದಿಂದ ನಿರಾಪೇಕ್ಷಣಾ ಪತ್ರವನ್ನು ಪಡೆಯುವುದನ್ನು ಕಡ್ಡಾಯಗೊಳಿಸಲಾಗಿದೆಯೇ;

(ಆ) ವಾಸ ಯೋಗ್ಯ ಪ್ರಮಾಣ ಪತ್ರ ಪಡೆದ ಬಳಿಕ ಅಗ್ನಿ ಶಾಮಕ ವಾಹನವು ಓಡಾಡಲು ನಿಗದಿಪಡಿಸಿದ ಜಾಗದಲ್ಲಿ ಬಹುಮಹಡಿ ಕಟ್ಟಡಗಳು, ಪಾರ್ಕ್, ಜಿಮ್ ಮುಂತಾದ ಶಾಶ್ವತ ಕಾಮಗಾರಿಗಳ ಮೂಲಕ ಸೌಲಭ್ಯಗಳನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಅಕ್ರಮ ನಿರ್ಮಾಣಗಳನ್ನು ತೆರವುಗೊಳಿಸಲು ಅಥವಾ ಈಗಾಗಲೇ ನೀಡಿರುವ ವಾಸಯೋಗ್ಯ ಪ್ರಮಾಣ ಪತ್ರವನ್ನು ಹಿಂಪಡೆಯಲು ಸರ್ಕಾರ ಕ್ರಮ ಕೈಗೊಂಡಿದೆಯೇ;

(ಇ) ಇದುವರೆಗೆ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಎಷ್ಟು ಬಹು ಮಹಡಿ ಕಟ್ಟಡಗಳ ವಾಸಯೋಗ್ಯ ಪ್ರಮಾಣ ಪತ್ರವನ್ನು ರದ್ದುಗೊಳಿಸಲಾಗಿದೆ; ಎಷ್ಟು ಬಹುಮಹಡಿ ಕಟ್ಟಡಗಳನ್ನು ವಾಸಯೋಗ್ಯ ಪ್ರಮಾಣಪತ್ರ ನೀಡಿದ ಬಳಿಕ ಪರಿಶೀಲನೆ ನಡೆಸಲಾಗಿದೆ; (ವಿವರ ನೀಡುವುದು)

(ಈ) ಬೆಂಗಳೂರು ನಗರದಲ್ಲಿ ಅಧಿಕಾರಿಗಳು ಲಂಚ ಪಡೆದು ವಾಸಯೋಗ್ಯ ಪ್ರಮಾಣಪತ್ರ (O.C.) ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಎಷ್ಟು ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ?